**ಕರ್ನಾಟಕ ಸರ್ಕಾರ**

ಸಂಖ್ಯೆ: ಇಪಿ 364 ಪಿಬಿಎಸ್ 2025

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:24.12.2025

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
ಬೆಂಗಳೂರು.

ಇವರಿಗೆ:

1. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ.

ಮಾನ್ಯರೆ,

ವಿಷಯ : ರಾಜ್ಯ ಸರ್ಕಾರದ ಮಹಿಳಾ ಶಿಕ್ಷಕಿಯರಿಗೆ ಮಾಸಿಕ 1 ದಿನ ವೇತನ ಸಹಿತ ಋತುಚಕ್ರ ರಜೆಯ ಸೌಲಭ್ಯವನ್ನು ಮಂಜೂರು ಮಾಡುವ ಕುರಿತು.

ಉಲ್ಲೇಖ:
1. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ(ರಿ), ಬೆಂಗಳೂರು ಇವರ ಪತ್ರ ಸಂಖ್ಯೆ: 210/1:2025-26, ದಿನಾಂಕ: 15.11.2025.
2. ಸರ್ಕಾರದ ಆದೇಶ ಸಂಖ್ಯೆ: ಆಇ 10 ಸೇನಿಸೇ 2025, ದಿನಾಂಕ: 02.12.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ(1)ರ ಪತ್ರದಲ್ಲಿ (ಪ್ರತಿ ಲಗತ್ತಿಸಿದೆ) ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ(ರಿ), ಬೆಂಗಳೂರು ಇವರ ದಿನಾಂಕ: 15.11.2025ರ ಮನವಿಯಲ್ಲಿ ಕಾರ್ಮಿಕ ಇಲಾಖೆಯ ಆದೇಶದಂತೆ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮಹಿಳಾ ಶಿಕ್ಷಕಿಯರಿಗೆ 1 ದಿನ ವೇತನ ಸಹಿತ ಋತುಚಕ್ರ ರಜೆಯ ಆದೇಶವನ್ನು ಹೊರಡಿಸಬೇಕಾಗಿ ಕೋರಿರುತ್ತಾರೆ.

..2

ಪರಿಶೀಲಿಸಲಾಗಿ, ಉಲ್ಲೇಖಿತ(2)ರ ಸರ್ಕಾರದ ಆದೇಶ ಸಂಖ್ಯೆ: ಆಇ 10 ಸೇನಿಸೇ 2025, ದಿನಾಂಕ: 02.12.2025ರಲ್ಲಿ, ಸರ್ಕಾರವು ಮಹಿಳಾ ಸರ್ಕಾರಿ ನೌಕರರಿಗೆ ಪ್ರತಿ ತಿಂಗಳು ಒಂದು ದಿನದಂತೆ ಋತುಚಕ್ರ ರಜೆಯ ಸೌಲಭ್ಯವನ್ನು ಷರತ್ತಿಗೊಳಪಟ್ಟು ಮಂಜೂರು ಮಾಡಿರುತ್ತದೆ. ಅದರಂತೆ ಎಲ್ಲ ಅರ್ಹ ಶಿಕ್ಷಕಿಯರಿಗೆ ಪ್ರತಿ ತಿಂಗಳು ಒಂದು ದಿನದಂತೆ ಋತುಚಕ್ರ ರಜೆಯ ಸೌಲಭ್ಯವನ್ನು ಉಲ್ಲೇಖಿತ (2)ರ ಸರ್ಕಾರದ ಆದೇಶದಲ್ಲಿನ ಷರತ್ತಿಗೊಳಪಟ್ಟು ಮಂಜೂರು ಮಾಡಲು ನಿಯಮಾನುಸಾರ ಕ್ರಮವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

24/12/2025

**(ಶಕುಂತಲಾ ಚೌಗಲಾ)**

ಸರ್ಕಾರದ ಜಂಟಿ ಕಾರ್ಯದರ್ಶಿ(ಸೇವೆಗಳು-2)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,

**ಪ್ರತಿ ಮಾಹಿತಿಗಾಗಿ:-**

1. ಸಂಬಂಧಪಟ್ಟ ಎಲ್ಲಾ ಉಪನಿರ್ದೇಶಕರುಗಳು(ಆಡಳಿತ), ಶಾಲಾ ಶಿಕ್ಷಣ ಇಲಾಖೆ.
2. ಸಂಬಂಧಪಟ್ಟ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕರುಗಳು, ಶಾಲಾ ಶಿಕ್ಷಣ ಇಲಾಖೆ.
3. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ(ರಿ), 5ನೇ ಮೇನ್, 4ನೇ ಕ್ರಾಸ್, ಗಾಂಧಿನಗರ ಬೆಂಗಳೂರು.